

ಅರುಣ ಪಿ. ಭಟ್ಟ

## ವಾರಭವಿಷ್ಯ: 31.10.2024ರಿಂದ 06.11.2024ರವರೆಗೆ




ಈ ವಾರ ನಿಮ್ಮ ವರ್ಚಸ್ಸು ವೃದ್ಧಿ ಆಗಲಿದೆ. ಶೈಕ್ಷಣಿಕ ಕ್ಷೇತ್ರದಲ್ಲಿ ನಿರೀಕ್ಷೆಗಿಂತ ಹೆಚ್ಚಿನ ಪ್ರಗತಿ. ವಾರದ ಮಧ್ಯದಲ್ಲಿ ಹೆಚ್ಚಿನ ಹಣ ಖರ್ಚಾಗಲಿದೆ. ಶತ್ರುಗಳ ಉಪಟಳ ಹೆಚ್ಚಾಗಲಿದೆ. ಇದರಿಂದ ಮಾನಸಿಕ ಆತಂಕಕ್ಕೆ ಗುರಿಯಾಗುತ್ತೀರಿ. ಕೌಟುಂಬಿಕ ಕಲಹ ಏರ್ಪಡಬಹುದು. ಅನಗತ್ಯ ವಾಗ್ವಾದ ಮಾಡಿಕೊಳ್ಳಬೇಡಿ. ವೈಯಕ್ತಿಕ ಸಂಬಂಧದಲ್ಲಿ ಬೇಸರ ಉಂಟಾಗುತ್ತದೆ. ಶುಭದಿನ 02. ಶ್ರೀರಾಜರಾಜೇಶ್ವರಿ ಜಪ ಮಾಡಿರಿ.




ವಾರದ ಆರಂಭದಲ್ಲಿ ಉದ್ಯೋಗ ಸ್ಥಳದಲ್ಲಿ ಏಳ್ಗೆ ಇದೆ. ನಿಮ್ಮ ಆರೋಗ್ಯ ಉತ್ತಮವಾಗಿ ಇರಲಿದೆ. ಮನೆಯಲ್ಲಿ ಸಂತೋಷದ ವಾತಾವರಣ ಇರುತ್ತದೆ. ಬಿಡುವಿಲ್ಲದ ಕೆಲಸದ ಮಧ್ಯೆಯೂ ಸಂಗಾತಿ ಮಕ್ಕಳ ಜೊತೆ ಸಮಯ ಕಳೆಯಲಿದ್ದೀರಿ. ವಾರದ ಮಧ್ಯದಲ್ಲಿ ನಿರೀಕ್ಷೆ ಮಾಡಿದ್ದಕ್ಕಿಂತ ಹೆಚ್ಚಿನ ಅನುಕೂಲ ಆಗಲಿದೆ. ಶೈಕ್ಷಣಿಕ ಕ್ಷೇತ್ರದಲ್ಲಿ ಶ್ರಮಕ್ಕೆ ತಕ್ಕ ಫಲ ದೊರೆಯಲಿದೆ. ಶುಭದಿನ 01. ಶ್ರೀರಾಮರಕ್ಷಾಸ್ತೋತ್ರ ಪಠಿಸಿರಿ.




ಮನೆಯಲ್ಲಿ ದೇವತಾ ಆರಾಧನೆ ಕಾರ್ಯಕ್ರಮದ ಸಾಧ್ಯತೆ ಇದೆ. ಸಾಮಾಜಿಕ ಕಾರ್ಯಗಳಲ್ಲಿ ಚಟುವಟಿಕೆಯಿಂದ ಪಾಲ್ಗೊಳ್ಳಲಿದ್ದೀರಿ. ಅಗತ್ಯ ಇರುವವರಿಗೆ ನೆರವು ಕೂಡ ನೀಡಲಿದ್ದೀರಿ. ಆದಾಯದಲ್ಲಿ ಹೆಚ್ಚಳ ಆಗುವ ಸಾಧ್ಯತೆ. ವೃತ್ತಿನಿರತರು ಹೆಚ್ಚು ಚಟುವಟಿಕೆಗಳಲ್ಲಿ ತೊಡಗುವ ಸಾಧ್ಯತೆ ಇದೆ. ಉದ್ಯೋಗಸ್ಥರಿಗೆ ಹೆಚ್ಚಿನ ಜವಾಬ್ದಾರಿ ಹೆಗಲ ಮೇಲೆ ಬರುತ್ತದೆ. ಶುಭದಿನ 31. ಸೌಂದರ್ಯ ಲಹರಿ ಪಠಿಸಿರಿ.




ಉದ್ಯೋಗಕ್ಕೆ ಹೊರತಾದ ಕೆಲಸಗಳನ್ನು ಪೂರೈಸುವುದಕ್ಕೇ ವಾರದ ಶುರುವಿನಲ್ಲಿ ಸಮಯ ನೀಡಬೇಕಾಗುತ್ತದೆ. ವಿದೇಶ ವ್ಯವಹಾರ, ಹಣ ಹೂಡಿಕೆಯಲ್ಲಿ ಉತ್ತಮ ಪ್ರಗತಿ. ಕಾನೂನು ವಿಚಾರಕ್ಕೆ ಸಂಬಂಧಿಸಿದ ಜವಾಬ್ದಾರಿಗಳನ್ನು ಪೂರೈಸಲು ಗಮನ ನೀಡಬೇಕಾಗುತ್ತದೆ. ರಿಯಲ್ ಎಸ್ಟೇಟ್ ವ್ಯವಹಾರಗಳನ್ನು ಮಾಡುವವರಿಗೆ ಪೂರಕ ವಾತಾವರಣ ಸೃಷ್ಟಿ ಆಗಲಿದೆ. ಶುಭದಿನ 04. ಲಿಂಗಾಷ್ಟಕ ಪಠಿಸಿರಿ.




ದಾಂಪತ್ಯ ಸಂತೋಷವಾಗಿ ಇರುತ್ತದೆ. ಸಂಬಂಧದಲ್ಲಿ ಬಾಂಧವ್ಯ ಇನ್ನಷ್ಟು ಗಟ್ಟಿಯಾಗುತ್ತದೆ. ವ್ಯಾಪಾರಿಗಳು ಬಹುಕಾಲದ ಯೋಜನೆಗಳನ್ನು ಅನುಷ್ಠಾನಕ್ಕೆ ತರಲಿದ್ದೀರಿ. ವಾರದ ಮಧ್ಯ ಭಾಗದಲ್ಲಿ ಪ್ರವಾಸಕ್ಕೆ ತೆರಳುವ ಸಾಧ್ಯತೆ ಇದೆ. ಆಹಾರ ಪಥ್ಯದಲ್ಲಿ ನಿಗಾ ವಹಿಸಿ. ವಾರದ ಅಂತ್ಯಕ್ಕೆ ಸರಿಯುತ್ತಾ ಸಾಮಾಜಿಕ ವರ್ಚಸ್ಸು ಹೆಚ್ಚಾಗಲಿದೆ. ಲಾಭದಲ್ಲಿ ಹೆಚ್ಚಳವಾಗಲಿದೆ. ಶುಭದಿನ 05. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.




ವಾರದ ಶುರುವಿನಲ್ಲಿ ನಿಮ್ಮ ಕೆಲಸ ಕಾರ್ಯಗಳನ್ನು ಪೂರ್ಣಗೊಳಿಸಲು ಶ್ರಮ ಪಡುತ್ತೀರಿ. ಮನೆಗೆ ಅಗತ್ಯ ಇರುವ ವಸ್ತುಗಳ ಖರೀದಿಗೆ ಹೆಚ್ಚಿನ ಹಣ ವ್ಯಯ ಮಾಡಲಿದ್ದೀರಿ. ಹಣಕಾಸಿನ ಮುಗ್ಗಟ್ಟು ಕಾಡಬಹುದು. ನಿಮ್ಮ ಕರ್ತವ್ಯವನ್ನು ಪೂರ್ಣಗೊಳಿಸುವ ಕಡೆಗೆ ಹೆಚ್ಚಿನ ಗಮನ ವಹಿಸಲಿದ್ದೀರಿ. ವಿರೋಧಿಗಳು ನಿಮ್ಮ ನೆಮ್ಮದಿಯನ್ನು ಹಾಳು ಮಾಡಲು ಪ್ರಯತ್ನಿಸಲಿದ್ದಾರೆ. ಶುಭದಿನ 02. ವಿಷ್ಣು ಸಹಸ್ರನಾಮ ಪಠಿಸಿರಿ.




ನಾನಾ ಆದಾಯ ಮೂಲದಿಂದ ಹಣಕಾಸಿನ ಹರಿವು ಹೆಚ್ಚಾಗಲಿದೆ. ಶೈಕ್ಷಣಿಕ ಕ್ಷೇತ್ರದಲ್ಲಿ ಉತ್ತಮವಾದ ಏಳ್ಗೆ ಇದೆ. ಮಕ್ಕಳ ಪ್ರಗತಿಯಿಂದ ಹೆಮ್ಮೆ, ಸಂತೋಷ ಮೂಡುತ್ತದೆ. ವೈವಾಹಿಕ ಜೀವನದಲ್ಲಿ ಸಂತೋಷ ಇರುತ್ತದೆ. ವಾರದ ಅಂತ್ಯಕ್ಕೆ ಹತ್ತಿರದ ಸಂಬಂಧಿಗಳನ್ನು ಭೇಟಿ ಆಗಲಿದ್ದೀರಿ. ಹಣ ಹೂಡಿಕೆ ಲಾಭದಾಯಕವಾಗಿ ಪರಿಣಮಿಸಲಿದೆ. ಶುಭದಿನ 02. ಶ್ರೀಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.




ವಾರದ ಆರಂಭದಲ್ಲಿ ನಿಮ್ಮ ಮೇಲೆ ಒತ್ತಡ ಕಂಡುಬರಲಿದೆ. ನಿಮ್ಮ ಪಾಲಿನ ಕೆಲಸಗಳನ್ನು ವೇಗವಾಗಿ ಪೂರ್ಣಗೊಳಿಸುವಿರಿ. ಸಾಮಾಜಿಕ ಜೀವನದಲ್ಲಿ ವರ್ಚಸ್ಸು ವೃದ್ಧಿಯಾಗಲಿದೆ. ಸಂಗಾತಿಗೆ ಉಡುಗೊರೆ ನೀಡುವ ಬಗ್ಗೆ ಆಲೋಚನೆ ಮಾಡುತ್ತೀರಿ. ಹಣ ಖರ್ಚಾದರೂ ಶ್ರಮಪಟ್ಟು ಬಾಕಿ ಹಣವನ್ನು ಪಡೆದುಕೊಳ್ಳಲಿದ್ದೀರಿ. ಆರೋಗ್ಯದಲ್ಲಿ ಸ್ವಲ್ಪ ಸಮಸ್ಯೆ ಆಗಬಹುದು. ಶುಭದಿನ 31. ಹನುಮಾನ್ ಚಾಲೀಸ್ ಪಠಿಸಿರಿ.




ವಾರದ ಶುರುವಿನಲ್ಲಿ ಪ್ರಗತಿ ಇದೆ. ಪ್ರತಿಷ್ಠೆಯನ್ನು ಹೆಚ್ಚು ಮಾಡಿಕೊಳ್ಳುವ ಕಡೆಗೆ ಪ್ರಯತ್ನಿಸಿ. ಕೆಲಸವನ್ನು ಪರಿಣಾಮಕಾರಿಯಾಗಿ ಪೂರ್ಣಗೊಳಿಸಲು ಯಶಸ್ವಿಯಾಗುತ್ತೀರಿ. ವಾರದ ಮಧ್ಯ ಭಾಗದಲ್ಲಿ ಉದ್ಯೋಗ ವ್ಯಾಪಾರ ವಿಚಾರಗಳು ಪ್ರಾಶಸ್ತ್ಯ ಪಡೆಯುತ್ತವೆ. ದಾನ ಧರ್ಮಗಳಲ್ಲಿ ನಾನಾ ಬಗೆಯಲ್ಲಿ ಅಡೆತಡೆ ಉಂಟಾಗುತ್ತದೆ. ಶುಭದಿನ 04. ಆದಿತ್ಯ ಹೃದಯ ಪಠಿಸಿರಿ.




ಹಿಂದೆಂದಿಗಿಂತ ಹೆಚ್ಚು ಸ್ಪರ್ಧಾತ್ಮಕವಾಗಿ ಇರುತ್ತೀರಿ. ಉದ್ಯಮಿಗಳಿಗೆ ಹಲವು ಬಗೆಯಲ್ಲಿ ಸವಾಲುಗಳು ಎದುರಾಗಲಿವೆ. ಹೆಚ್ಚು ಹಣ ಖರ್ಚು ಮಾಡಲಿದ್ದೀರಿ. ವೈಯಕ್ತಿಕ ಸಂಬಂಧದಲ್ಲಿ ಭಿನ್ನಾಭಿಪ್ರಾಯ ಕಾಣಿಸಿಕೊಳ್ಳಬಹುದು. ಮುಖ್ಯ ಕೆಲಸಗಳನ್ನು ವೇಗವಾಗಿ ಪೂರ್ಣಗೊಳಿಸಲಿದ್ದೀರಿ. ಆದರೆ ಅಗತ್ಯ ಕಂಡುಬಂದಲ್ಲಿ ಹಿರಿಯರ, ಅನುಭವಿಗಳ ನೆರವನ್ನು ಪಡೆಯಿರಿ. ಶುಭದಿನ 03. ಕಾಲಭೈರವನ ಆರಾಧನೆ ಮಾಡಿರಿ.




ವಾರದ ಆರಂಭದಲ್ಲಿ ನಿಮ್ಮ ಜವಾಬ್ದಾರಿಯನ್ನು ಪೂರೈಸುವುದಕ್ಕಾಗಿಯೇ ಹೆಚ್ಚು ಸಮಯವನ್ನು ಮೀಸಲಿಡಬೇಕಾಗುತ್ತದೆ. ನಿಮ್ಮ ನಡವಳಿಕೆಯಿಂದ ಸಹೋದ್ಯೋಗಿಗಳು ಬಹಳ ಹೆಮ್ಮೆ ಪಡುತ್ತಾರೆ. ಆದಾಯ ಮೂಲಗಳಿಂದ ಹೆಚ್ಚು ಅನುಕೂಲ ಇದೆ. ನೀವು ಹಾಕಿದ ಶ್ರಮಕ್ಕೆ ತಕ್ಕ ಫಲಿತ ದೊರೆಯಬಹುದು. ದೈಹಿಕ ಆಯಾಸ ಕಾಣಿಸಿಕೊಳ್ಳುತ್ತದೆ. ಶುಭದಿನ 04. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ಭವಿಷ್ಯದ ಸಲುವಾಗಿ ವಾರದ ಶುರುವಿನಲ್ಲಿ ಹೆಚ್ಚಿನ ಸಮಯ ನೀಡುತ್ತೀರಿ. ದೂರ ಪ್ರದೇಶಗಳಿಗೆ ಪ್ರಯಾಣ ಮಾಡಬೇಕಾಗುತ್ತದೆ. ಹಣ ಹೂಡಿಕೆಯಲ್ಲಿ ಲಾಭವಾಗುವ ಸಾಧ್ಯತೆ ಇದೆ. ವಾರದ ಅಂತ್ಯಕ್ಕೆ ಸರಿಯುತ್ತಾ ನಿಮ್ಮ ಗಮನ ಪೂರ್ತಿಯಾಗಿ ಮನೆ ಬಗ್ಗೆ ತಿರುಗುತ್ತದೆ. ನೀವು ಉದ್ಯೋಗ ಮಾಡುವ ಸ್ಥಳದಲ್ಲಿ ತೆಗೆದುಕೊಂಡ ನಿರ್ಧಾರವೊಂದು ಲಾಭದಾಯಕ ಆಗಲಿದೆ. ಶುಭದಿನ 04. ದತ್ತಗುರು ಚರಿತ್ರೆ ಪಠಿಸಿರಿ.